**All India Radio: Bangalore**
**National Bulletin In Kannada**
**15.02.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**15.02.2025 13.10 p.m.**
**<><><><>**

ಮುಖ್ಯಾಂಶಗಳು

1. ತಂತ್ರಜ್ಞಾನ ಯುಗದಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಎಐ ಅಳವಡಿಕೆಗೆ ಕೇಂದ್ರ ಸರ್ಕಾರದಿಂದ ಕ್ರಮ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ ಮೀನು ಉತ್ಪಾದನೆ ದ್ವಿಗುಣ - ಕೇಂದ್ರ ಮೀನುಗಾರಿಕಾ ಸಚಿವಾಲಯ
3. ಮಸ್ಕತ್‌ನಲ್ಲಿ ನಾಳೆ ಹಿಂದೂ ಮಹಾಸಾಗರ ಅಧಿವೇಶನ ಆರಂಭ; ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್, ಬಾಂಗ್ಲಾದೇಶದ ವಿದೇಶಾಂಗ ಸಲಹೆಗಾರರೊಂದಿಗೆ ಮಾತುಕತೆ ನಿರೀಕ್ಷೆ
4. ನಾಲ್ಕನೇ ದಕ್ಷಿಣ ಏಷ್ಯಾ ಸೀನಿಯರ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್; ಮೇ ೩ ರಿಂದ ೫ರ ವರೆಗೆ ರಾಂಚಿಯಲ್ಲಿ ಆಯೋಜನೆ

<><><><>

ರಾಂಚಿಯಲ್ಲಿರುವ ಬಿರ್ಲಾ ತಂತ್ರಜ್ಞಾನ ಸಂಸ್ಥೆ, ಬಿಐಟಿ ಮೆಸ್ರಾದ ೭೦ನೇ ವರ್ಷದ ಸಂಸ್ಥಾಪನಾ ದಿನದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪಾಲ್ಗೊಂಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, ತಂತ್ರಜ್ಞಾನ ಮತ್ತು ಹ್ಯುಮಾನಿಟೀಸ್ ಅಂದರೆ ಮಾನವೀಯ ಶಾಸ್ತ್ರಗಳು ಪರಸ್ಪರ ಪೂರಕವಾಗಿದ್ದು, ಒಂದೇ ಸೂರಿನಡಿಯಲ್ಲಿ ತಂದಿರುವುದು ರಾಷ್ಟ್ರೀಯ ಶಿಕ್ಷಣ ನೀತಿಯ ದೃಷ್ಟಿಕೋನದ ಸಮರ್ಪಕ ಸಾಕಾರಕ್ಕೆ ಸಹಕಾರಿಯಾಗಿದೆ. ನಮ್ಮದು ತಂತ್ರಜ್ಞಾನ ಯುಗವಾಗಿದೆ, ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಆಗಿರುವ ಬೆಳವಣಿಗೆಗಳು ನಮ್ಮ ಜೀವನಶೈಲಿಯನ್ನು ಬದಲಿಸಿದ್ದು, ಈ ಬೆಳವಣಿಗೆಗಳು ಸಮಾಜದ ಬಹುತೇಕ ಎಲ್ಲರಿಗೂ ಕೈಗೆಟಕುವಂತಾಗಿದೆ. ಆದರೆ ಈ ಬೆಳವಣಿಗೆ ಸೈಬರ್ ಅಪರಾಧಗಳ ಏರಿಕೆಗೆ ಕಾರಣವಾಗಿದ್ದು, ಈ ಕುರಿತು ಜನರಿಗೆ ಹೆಚ್ಚಿನ ಅರಿವು ಮೂಡಿಸುವ ಮೂಲಕ ಸೈಬರ್ ಅಪರಾಧಗಳನ್ನು ಸಮರ್ಥವಾಗಿ ಎದುರಿಸಲಾಗುತ್ತಿದೆ

ಎಂದರು. ಕೃತಕ ಬುದ್ಧಿಮತ್ತೆ ಮತ್ತು ಮಷಿನ್ ಲರ್ನಿಂಗ್ ಕ್ಷೇತ್ರದಲ್ಲಿ ಮುಂಬರುವ ವರ್ಷದಲ್ಲಿ ಅಭೂತಪೂರ್ವ ಬೆಳವಣಿಗೆಗಳಾಗಲಿವೆ. ಕೃತಕ ಬುದ್ಧಿಮತ್ತೆ ಜಾಗತಿಕ ಆರ್ಥಿಕತೆಗಳನ್ನು ಪರಿವರ್ತಿಸುತ್ತಿರುವಂತೆ ಇದಕ್ಕನುಗುಣವಾಗಿ ಭಾರತ ಪರಿವರ್ತನೆಯಾಗುತ್ತಿದೆ. ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಎಐ ಅಳವಡಿಕೆಗೆ ಕೇಂದ್ರ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿದೆ ಎಂದರು.

*****ಧ್ವನಿ*** ರಾಷ್ಟ್ರಪತಿ (೩೯ ಸೆಕೆಂಡ್ಸ್)**

ಇಂದಿನಿಂದ ಆರಂಭವಾಗಿರುವ ಸಂಭ್ರಮಾಚರಣೆ ಆರು ತಿಂಗಳ ಕಾಲ ಅಂದರೆ ಬರುವ ಜುಲೈ ೧೫ರ ವರೆಗೆ ನಡೆಯಲಿದೆ.

<><><><>

ಕಳೆದ ಹತ್ತು ವರ್ಷಗಳಲ್ಲಿ ದೇಶದಲ್ಲಿ ಮೀನು ಉತ್ಪಾದನೆ ದ್ವಿಗುಣಗೊಂಡಿದೆ ಎಂದು ಕೇಂದ್ರ ಮೀನುಗಾರಿಕಾ ಸಚಿವಾಲಯ ತಿಳಿಸಿದೆ. ೨೦೧೩-೧೪ರಲ್ಲಿ ೯೫ ಲಕ್ಷ ಟನ್ ನಷ್ಟಿದ್ದ ಮೀನು ಉತ್ಪಾದನೆ ೨೦೨೩-೨೪ರಲ್ಲಿ ೧೮೪ ಲಕ್ಷ ಟನ್‌ಗಳಿಗೆ ಏರಿಕೆ ಕಂಡಿದೆ. ಜಾಗತಿಕ ಮೀನು ಉತ್ಪಾದನೆಯಲ್ಲಿ ಸುಮಾರು ಶೇಕಡ ೮ರಷ್ಟು ಪಾಲು ಹೊಂದಿರುವ ಭಾರತ, ಎರಡನೇ ಅತಿ ದೊಡ್ಡ ಮೀನು ಉತ್ಪಾದನಾ ರಾಷ್ಟ್ರವಾಗಿದೆ ಎಂದು ಸಚಿವಾಲಯ ತಿಳಿಸಿದೆ. ಕಳೆದ ಎರಡು ದಶಕಗಳಲ್ಲಿ ದೇಶದ ಮೀನುಗಾರಿಕಾ ವಲಯ ಅಭೂತಪೂರ್ವ ಅಭಿವೃದ್ಧಿ ಮತ್ತು ಪರಿವರ್ತನೆಯನ್ನು ಕಂಡಿದೆ. ಇತ್ತೀಚೆಗೆ ಮಂಡಿಸಲಾದ ೨೦೨೫-೨೬ರ ಕೇಂದ್ರ ಬಜೆಟ್‌ನಲ್ಲಿ ಇಲ್ಲಿಯವರೆಗಿನ ಅತಿ ಹೆಚ್ಚಿನ ಅಂದರೆ ೨ ಸಾವಿರದ ೭೦೩ ಕೋಟಿ ರೂಪಾಯಿ ವಾರ್ಷಿಕ ಆಯವ್ಯಯ ಅನುದಾನವನ್ನು ಮೀನುಗಾರಿಕಾ ವಲಯಕ್ಕೆ ಮೀಸಲಿಡಲಾಗಿದೆ.

<><><><>

ಮಸ್ಕತ್‌ನಲ್ಲಿ ನಾಳೆ ಆರಂಭವಾಗಲಿರುವ ಹಿಂದೂ ಮಹಾಸಾಗರ ಅಧಿವೇಶನದ ಸಂದರ್ಭದಲ್ಲಿ ಭಾರತದ ವಿದೇಶಾಂಗ ಖಾತೆ ಸಚಿವ ಡಾ.ಎಸ್.ಜೈಶಂಕರ್ ಬಾಂಗ್ಲಾದೇಶದ ವಿದೇಶಾಂಗ ಸಲಹೆಗಾರರೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆ ಇದೆ. ಭಾರತ ಮತ್ತು ಒಮ್ಮಾನ್ ವಿದೇಶಾಂಗ ಸಚಿವಾಲಯಗಳು ಜಂಟಿಯಾಗಿ ಎರಡು ದಿನಗಳ ಈ ಅಧಿವೇಶನ ಆಯೋಜಿಸಿದ್ದು ಇದರಲ್ಲಿ ಪಾಲ್ಗೊಳ್ಳಲು ಬಾಂಗ್ಲಾ ದೇಶದ ವಿದೇಶಾಂಗ ಸಲಹೆಗಾರ ಮೊಹಮ್ಮದ್ ತೌಸೀಫ್ ಹುಸೇನ್ ಅವರಿಗೆ ಒಮಾನ್ ಆಮಂತ್ರಣ ನೀಡಿದೆ. ಸಮುದ್ರಯಾನ ಸಹಭಾಗಿತ್ವದಲ್ಲಿ ಹೊಸ ದಿಗಂತಗಳು ಎನ್ನುವುದು ಈ ಅಧಿವೇಶನದ ಘೋಷ ವಾಕ್ಯವಾಗಿದೆ.

<><><>

ಜರ್ಮನಿಯಲ್ಲಿ ನಿನ್ನೆ ನಡೆದ ಮ್ಯೂನಿಚ್ ಭದ್ರತಾ ಸಮ್ಮೇಳನದ ನೇಪಥ್ಯದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಉಕ್ರೇನಿಯನ್ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ ಅವರನ್ನು ಭೇಟಿಯಾದರು. ಉಕ್ರೇನ್ ಸಂಘರ್ಷ ಪರಿಹಾರಕ್ಕಾಗಿ ನಡೆಯುತ್ತಿರುವ ಪ್ರಯತ್ನಗಳ ಕುರಿತು ಇಬ್ಬರೂ ನಾಯಕರು ಚರ್ಚಿಸಿದರು. ಭಾರತ-ಉಕ್ರೇನ್ ದ್ವಿಪಕ್ಷೀಯ ಸಹಕಾರದ ಪ್ರಗತಿಯ ಕುರಿತು ಅವರು ಸಮಾಲೋಚನೆ ನಡೆಸಿದರು. ಇದರ ಜೊತೆಗೆ ಡಾ. ಜೈಶಂಕರ್, ಜರ್ಮನಿಯ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ಅವರನ್ನು ಸಹ ಭೇಟಿಯಾದರು.

<><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಹೊಸ ಆದಾಯ ತೆರಿಗೆ ಮಸೂದೆಯನ್ನು ಪರಿಶೀಲಿಸಲು ೩೧ ಸದಸ್ಯರ ಆಯ್ಕೆ ಸಮಿತಿಯನ್ನು ರಚಿಸಿದ್ದಾರೆ. ಬಿಜೆಪಿ ಸಂಸದ ಬೈಜಯಂತ್ ಪಾಂಡಾ ಈ ಸಮಿತಿಯ ನೇತೃತ್ವ ವಹಿಸಲಿದ್ದು, ಮುಂದಿನ ಅಧಿವೇಶನದ ಮೊದಲ ದಿನದೊಳಗೆ ತನ್ನ ವರದಿಯನ್ನು ಸಲ್ಲಿಸಲಾಗುವುದು. ಆದಾಯ ತೆರಿಗೆಗೆ ಸಂಬಂಧಿಸಿದ ಕಾನೂನನ್ನು ಕ್ರೋಢೀಕರಿಸುವ ಮತ್ತು ತಿದ್ದುಪಡಿ ಮಾಡುವ ಗುರಿಯನ್ನು ಹೊಂದಿರುವ ಆದಾಯ ತೆರಿಗೆ ಮಸೂದೆ ೨೦೨೫ ಅನ್ನು ಕಳೆದ ಗುರುವಾರ ಲೋಕಸಭೆಯಲ್ಲಿ ಪರಿಚಯಿಸಲಾಯಿತು. ಮಸೂದೆಯನ್ನು ಪರಿಚಯಿಸುವಾಗ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಕರಡು ಕಾನೂನನ್ನು ಸದನದ ಆಯ್ಕೆ ಸಮಿತಿಗೆ ಉಲ್ಲೇಖಿಸುವಂತೆ ಲೋಕಸಭೆಯ ಸ್ಪೀಕರ್ ಅವರನ್ನು ಒತ್ತಾಯಿಸಿದ್ದರು. ಮಸೂದೆಯ ಕುರಿತು ಮಾತನಾಡಿದ ಸೀತಾರಾಮನ್, ಅಸ್ತಿತ್ವದಲ್ಲಿರುವ ಆದಾಯ ತೆರಿಗೆ ಕಾಯ್ದೆಗೆ ಹೋಲಿಸಿದರೆ ಹೊಸ ಮಸೂದೆ ಕಡಿಮೆ ವಿಭಾಗಗಳು ಮತ್ತು ಅಧ್ಯಾಯಗಳನ್ನು ಹೊಂದಿದೆ ಮತ್ತು ಸಾಮಾನ್ಯ ಜನರಿಗೆ ಸುಲಭವಾಗಿ ಅರ್ಥವಾಗುವಂತೆ ಇದನ್ನು ಸರಳೀಕರಿಸಲಾಗಿದೆ ಎಂದು ಹೇಳಿದರು.

<><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಜಮ್ಮುವಿಗೆ ಒಂದು ದಿನದ ಭೇಟಿ ನೀಡಿದ್ದು, ಕತ್ರಾದಲ್ಲಿ ಶ್ರೀ ಮಾತಾ ವೈಷ್ಣೋದೇವಿ ವಿಶ್ವವಿದ್ಯಾಲಯದ ೧೦ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದರು. ಉಪರಾಷ್ಟ್ರಪತಿಗಳು ರಿಯಾಸಿ ಜಿಲ್ಲೆಯ ತ್ರಿಕೂಟ ಬೆಟ್ಟಗಳ

ಮೇಲಿರುವ ಮಾತಾ ವೈಷ್ಣೋ ದೇವಿ ದೇವಾಲಯ ಮತ್ತು ಭೈರೋನ್ ದೇವಾಲಯದಲ್ಲಿ ಪೂಜೆ ಸಲ್ಲಿಸಲಿದ್ದಾರೆ.

<><><><>

ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವರಾದ ಅಶ್ವಿನಿ ವೈಷ್ಣವ್ ನಿನ್ನೆ ರಾತ್ರಿ ಬೆಂಗಳೂರಿಗೆ ಆಗಮಿಸಿದ್ದು, ಇಂದು ಬೆಂಗಳೂರಿನ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ನಗರದ ಖಾಸಗಿ ಹೋಟೆಲ್‌ನಲ್ಲಿ ಸಂಜೆ ನಡೆಯಲಿರುವ ಸಭೆಯಲ್ಲಿ ರೈಲ್ವೆ ಆಯವ್ಯಯದ ಕುರಿತು ಪರಿಣಿತರೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ವಿದ್ಯಾರ್ಥಿಗಳಲ್ಲಿ ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಅರಿವು ಮೂಡಿಸಲು ಪ್ರಧಾನಿ ನರೇಂದ್ರ ಮೋದಿ ಆಯೋಜಿಸಿರುವ ಪರೀಕ್ಷಾ ಪೆ ಚರ್ಚಾ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದ್ದು, ಇಂದಿನ ೫ನೇ ಸಂಚಿಕೆಯಲ್ಲಿ ಆಧ್ಯಾತ್ಮಿಕ ಗುರು ಸದ್ಗುರು ಜಗ್ಗಿ ವಾಸುದೇವ್ ಕಲಿಕೆಯನ್ನು ಆಸಕ್ತಿಕರ ಚಟುವಟಿಕೆಯನ್ನಾಗಿ ಮಾಡುವ ಹಾಗೂ ಸಮತೋಲಿತ ಹಾಗೂ ಚೈತನ್ಯಶೀಲ ಮನಸ್ಸನ್ನು ಬೆಳೆಸುವ ಕುರಿತಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಪರೀಕ್ಷೆಯ ಸಮಯದಲ್ಲಿ ಏಕಾಗ್ರತೆ ಹೆಚ್ಚಿಸಿ, ಉತ್ತಮ ಸಾಧನೆ ಮಾಡಲು ಪೂರಕವಾಗುವಂತಹ ಕೆಲವು ವಿಧಾನಗಳನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಿದರು.

***** ಧ್ವನಿ *** ಸದ್ಗುರು ಜಗ್ಗಿ ವಾಸುದೇವ್ (೨೭ ಸೆಕೆಂಡ್ಸ್)**

<><><><>

ವಿವಿಧ ಬ್ಯಾಂಕಿಂಗ್ ನಿಬಂಧನೆಗಳನ್ನು ಉಲ್ಲಂಘಿಸಿದ್ದಕ್ಕಾಗಿ ಹಲವು ಖಾಸಗಿ ಹಣಕಾಸು ಸಂಸ್ಥೆಗಳಿಗೆ ಭಾರತೀಯ ರಿಸರ್ವ್ ಬ್ಯಾಂಕ್ ದಂಡ ವಿಧಿಸಿದೆ. ಶ್ರೀರಾಮ್ ಫೈನಾನ್ಸ್ ಮೇಲೆ ೫ ಲಕ್ಷ ೮೦ ಸಾವಿರದ ರೂಪಾಯಿ, ಉಜ್ಜೀವನ್ ಸಣ್ಣ ಹಣಕಾಸು ಬ್ಯಾಂಕ್ ಮೇಲೆ ೭ ಲಕ್ಷ ೬೦ ಸಾವಿರ ಹಾಗೂ ನೈನಿತಾಲ್ ಬ್ಯಾಂಕ್ ಲಿಮಿಟೆಡ್ ಮೇಲೆ ೭೧ ಲಕ್ಷದ ೪೦ ಸಾವಿರ ರೂಪಾಯಿ ದಂಡ ವಿಧಿಸಲಾಗಿದೆ. ಆರ್‌ಬಿಐ ಬಿಡುಗಡೆಗೊಳಿಸಿರುವ ಪ್ರಕಟಣೆಗಳ ಯಲ್ಲಿ ಈ ಮಾಹಿತಿ ನೀಡಲಾಗಿದೆ.

<><><><>

ಪ್ರಯಾಗ್‌ರಾಜ್ ಜಿಲ್ಲೆಯ ಮೇಜಾ ರಸ್ತೆ ಕ್ರಾಸಿಂಗ್ ಬಳಿ ನಿನ್ನೆ ರಾತ್ರಿ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಕಾರೊಂದು ವೇಗವಾಗಿ ಚಲಿಸುತ್ತಿದ್ದ ಬಸ್ಸಿಗೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ೧೦ ಮಂದಿ ಸಾವನ್ನಪ್ಪಿದ್ದು, ೧೯ ಜನರು ಗಾಯಗೊಂಡಿದ್ದಾರೆ. ಪ್ರಯಾಗ್‌ರಾಜ್ ಪೊಲೀಸ್ ಆಯುಕ್ತ ತರುಣ್ ಗಬಾ ಈ ಕುರಿತು ಮಾಹಿತಿ ನೀಡಿ, ಛತ್ತೀಸ್‌ಗಢದ ಕೊರ್ಬಾದಿಂದ ಪ್ರಯಾಗ್‌ರಾಜ್ ಕಡೆಗೆ ಚಲಿಸುತ್ತಿದ್ದ ಕಾರು, ಪ್ರಯಾಗ್‌ರಾಜ್‌ದಿಂದ ವಾರಾಣಸಿಯೆಡೆಗೆ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ಸಿಗೆ ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು, ಈ ಘಟನೆ ಕುರಿತು ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರು ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದು, ಗಾಯಗೊಂಡವರಿಗೆ ಸೂಕ್ತ ಚಿಕಿತ್ಸೆ ಒದಗಿಸಲು ಸಹಕರಿಸುವಂತೆ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಿದ್ದಾರೆ.

<><><>

ನಾಲ್ಕನೇ ದಕ್ಷಿಣ ಏಷ್ಯಾ ಸೀನಿಯರ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್ ಅನ್ನು ಮೇ ೨ ರಿಂದ ಮೇ ೫ರ ವರೆಗೆ ರಾಂಚಿಯಲ್ಲಿ ಆಯೋಜಿಸಲಾಗುತ್ತಿದೆ. ಭಾರತ, ಶ್ರೀಲಂಕಾ, ಪಾಕಿಸ್ತಾನ, ಬಾಂಗ್ಲಾದೇಶ, ನೇಪಾಳ, ಭೂತಾನ್ ಮತ್ತು ಮಾಲ್ಡೀವ್ಸ್‌ನ ಕ್ರೀಡಾಕೂಟಗಳು ಈ ಚಾಂಪಿಯನ್‌ಶಿಪ್‌ನಲ್ಲಿ ಸ್ಪರ್ಧಿಸಲಿದ್ದಾರೆ. ಈ ಮುನ್ನ ಕಳೆದ ವರ್ಷದ ಅಕ್ಟೋಬರ್ ೪ ರಿಂದ ೬ರ ವರೆಗೆ ನಿರ್ಧರಿಸಲಾಗಿತ್ತಾದರೂ ನಂತರ ಇದನ್ನು ಮುಂದೂಡಲಾಗಿತ್ತು. ಭಾರತದಲ್ಲಿ ಕೊನೆಯ ಆವೃತ್ತಿಯನ್ನು ೨೦೦೮ರಲ್ಲಿ ಆಯೋಜಿಸಲಾಗಿತ್ತು. ಈ ಚಾಂಪಿಯನ್ ಶಿಪ್ ೧೭ ವರ್ಷಗಳ ನಂತರ ದೇಶದಲ್ಲಿ ಆಯೋಜಿಸಲಾಗುತ್ತಿದೆ. ಈ ಚಾಂಪಿಯನ್ ಶಿಪ್‌ನ ಮೊದಲ ಎರಡು ಆವೃತ್ತಿಗಳು ಕ್ರಮವಾಗಿ ೧೯೯೭ ಮತ್ತು ೧೯೯೮ರಲ್ಲಿ ನಡೆದಿದ್ದವು.

<><><>

ಇಂದು ಸಂಜೆ ವಡೋದರಾ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂ ಪಿಎಲ್ ೨೦೨೫ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>